# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

## ವಾರ್ಡ್ ನಂ.70 : ರಾಜಗೋಪಾಲ ನಗರ

**ದಿನಾಂಕ: 15.05.2021 ರಂದು ಮಧ್ಯಾಹ್ನ 2.00 ಗಂಟೆಗೆ ಶ್ರೀಮತಿ ಹೆಚ್.ಕಮಲ ನೋಡಲ್ ಅಧಿಕಾರಿ, ವಾರ್ಡ್ 70 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

**ಸಭೆಯಲ್ಲಿ ಹಾಜರಿದ್ದವರು:**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀಮತಿ ಹೆಚ್.ಕಮಲ | ನೋಡಲ್ ಅಧಿಕಾರಿ–ವಾರ್ಡ್ ನಂ.70 |
| 2 | ಶ್ರೀ ಎಸ್.ಕೆ.ಹೇಮಂತ್ ಕುಮಾರ್ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು–ವಾರ್ಡ್ 70 |
| 3 | ಕೆ.ಶಿವಲಿಂಗಯ್ಯ | ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.70 |
| 4 | ತ್ರಿವೇಣಿ | ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.70 |
| 5 | ಎನ್ ವೆಂಕಟೇಶ್ | ಕಂದಾಯ ಮೌಲ್ಯಮಾಪಕರು, ವಾರ್ಡ್ ನಂ.70 |

:ನಡಾವಳಿಯ ವರದಿ:

➢ ಕಾರ್ಯದರ್ಶಿಗಳಾದ ಶ್ರೀ ಎಸ್.ಕೆ.ಹೇಮಂತ್ ಕುಮಾರ್ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್ ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

- **ಕೋವಿಡ್–19, ಸಾಂಕ್ರಾಮಿಕ ರೋಗದ ಬಗ್ಗೆ**
  - ವಾರ್ ರೂಂ ಮತ್ತು Triage Center ಗಳನ್ನು ಸ್ಥಾಪಿಸಲು ಸರ್ಕಾರಿ ಪ್ರೌಢಶಾಳೆಯ ಕಟ್ಟಡವನ್ನು ಗುರುತಿಸಿದ್ದು, ಎಲ್ಲಾ ಮೂಲಭೂತ ಸೌಕರ್ಯಗಳನ್ನು ಒದಗಿಸಿಸರುವುದಾಗೀ ಸಹಾಯಕ ಅಭಿಯಂತರರು ತಿಳಿಸಿದ್ದು, ವೈದ್ಯರು ಮತ್ತು ವೈದ್ಯಕೀಯ ಉಪಕರಣಗಳು ಒದಗಿಸಿದಲ್ಲಿ ಕೂಡಲೇ ಕೇಂದ್ರಗಳನ್ನು ಕಾರ್ಯಾರಂಭ ಮಾಡಲು ಸರ್ವಾನುಮತದಿಂದ ತೀರ್ಮಾನಿಸಲಾಯಿತು.
  - ಕೋವಿಡ್ ಕೇರ್ ಕೇಂದ್ರ ಸ್ಥಾಪಿಸಲು ವಾರ್ಡ್ ವ್ಯಾಪ್ತಿಯಲ್ಲಿ ಯಾವುದೇ ಸರ್ಕಾರಿ ಕಟ್ಟಡ ಹಾಗೂ ಸಮುದಾಯ ಭವನಗಳ ಇಲ್ಲದಿರುವುದರಿಂದ ಪಕ್ಕದ ವಾರ್ಡ್‌ಗಳಲ್ಲಿ ವಸತಿ ಗೃಹಗಳನ್ನು ಗುರುತಿಸಲು ಕಂದಾಯ ಅಧಿಕಾರಿರವರಿಗೆ ಸೂಚಿಸಲಾಯಿತು.

- ಶ್ರೀಮತಿ ಹೆಚ್.ಕಮಲ, ನೋಡಲ್ ಅಧಿಕಾರಿರವರು ಮಾತನಾಡಿ ಕೋವಿಡ್-19 ಸಾಂಕ್ರಾಮಿಕ ರೋಗವನ್ನು ತಡೆಗಟ್ಟಲು ಸಲುವಾಗಿ ವಾರ್ಡ್ 70ರ ವ್ಯಾಪ್ತಿಯಲ್ಲಿ ಆಸಕ್ತಿಯುಳ್ಳ ಸ್ವಯಂ ಸೇವಕರನ್ನು ಗುರುತಿಸಿ ಪಟ್ಟಿಯನ್ನು ತಯಾರಿಸಲು ಕಾರ್ಯದರ್ಶಿರವರಿಗೆ ಸೂಚಿಸಲಾಯಿತು ಹಾಗೂ ಸಭೆಯಲ್ಲಿ ಹಾಜರಿದ್ದ ವಿವಿಧ ಇಲಾಖೆಗಳ ಅಧಿಕಾರಿಗಳಿಗೆ ಸ್ವಯಂ ಸೇವಕರನ್ನು ಗುರುತಿಸಿ ಪಟ್ಟಿಯನ್ನು ನೀಡುವಂತೆ ಸೂಚಿಸಲಾಯಿತು.

ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ಕೋವಿಡ್-19 ಸಾಂಕ್ರಾಮಿಕವನ್ನು ವಾರ್ಡ್ ಮಟ್ಟದಲ್ಲಿಯೇ ಪರಿಹರಿಸುವ ನಿಟ್ಟಿನಲ್ಲಿ ಕಾರ್ಯಪ್ರವೃತ್ತರಾಗಿ ಸಹಕಾರ ನೀಡಬೇಕೆಂದು ಮನವಿ ಮಾಡಿದರು.

- ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಎಸ್.ಕೆ.ಹೇಮಂತ್ ಕುಮಾರ್ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಸಹಿ)
ಸದಸ್ಯ ಕಾರ್ಯದರ್ಶಿ-ವಾರ್ಡ್ 70 ಹಾಗೂ
ಸಹಾಯಕ ಅಭಿಯಂತರರು,

H Kamala.
(ಹೆಚ್.ಕಮಲ)
ನೋಡಲ್ ಅಧಿಕಾರಿ ವಾರ್ಡ್-70

ಪ್ರತಿಯನ್ನು:

1) ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನಸಭಾ ಕ್ಷೇತ್ರ, ರವರ ಆದ್ಯ ಗಮನಕ್ಕೆ ಕಳುಹಿಸಿದೆ.
2) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
3) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
4) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
6) ಸಹಾಯಕ ಕಂದಾಯ ಅಧಿಕಾರಿ (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
7) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.70 ರವರ ಮಾಹಿತಿಗಾಗಿ
8) ವಾರ್ಡ್ ಸಮಿತಿ ಸಭೆಯ ಸದಸ್ಯರಿಗೆ ಮಾಹಿತಿಗಾಗಿ ಕಳುಹಿಸಿದೆ.
9) ಕಛೇರಿ ಕಡತಕ್ಕೆ